**ದಿನಾಂಕ: 20.03.2021 ರಂದು 10–30 ಕ್ಕೆ ಶ್ರೀ ಹೆಚ್. ನಾಗರಾಜಪ್ಪ, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್–177 (ಜೆ.ಪಿ.ನಗರ) ನಡೆದ ಸಭೆಯ ನಡಾವಳಿಗಳು:**

**: ಚರ್ಚೆಯಾದ ವಿಷಯಗಳು :**

1. ವಾಡ್–177ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್–19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

**: ಸಭೆಗೆ ಹಾಜರಾಗಿದ್ದವರ ವಿವರಗಳು :**

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 177ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಬಿಡಬ್ಲ್ಯೂಎಸ್ಎಸ್‌ಬಿ ಅಭಿಯಂತರರು |
| ಸದಸ್ಯರುಗಳು | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| ಸದಸ್ಯರುಗಳು | ತೋಟಗಾರಿಕಾ ಅಧೀಕ್ಷಕರು (ದಕ್ಷಿಣ) |
| ಸದಸ್ಯರುಗಳು | ಬೆಸ್ಕಾಂ ಅಧಿಕಾರಿಗಳು |
| ಸದಸ್ಯರುಗಳು | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ರೋಡ್ ಇನ್‌ಫ್ರಾ) |
| ಸದಸ್ಯರುಗಳು | ಕಂದಾಯ ಪರಿವೀಕ್ಷಕರು, ವಾರ್ಡ್ 177 |
| ಸದಸ್ಯರುಗಳು | ಅರಣ್ಯ ಇಲಾಖೆ ಅಧಿಕಾರಿಗಳು |
| ಸದಸ್ಯರುಗಳು | ಮಾರ್ಷಲ್ |
| ಸಾರ್ವಜನಿಕರು | ಶ್ವೇತಾ .ಎಸ್ WOW GROUP (WOW) |
| ಸಾರ್ವಜನಿಕರು | ಶಕೀಲಾ ಭಾನು RWA- WOW GROUP |

**:ನಡಾವಳಿಯ ವರದಿ:**

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಪು.ತಿ.ನೋ

Scanned with CamScanner

<u>ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.</u>

- ದುರ್ಗಾ ಪರಮೇಶ್ವರಿ ಗ್ರೌಂಡ್ ಬಳಿ ಊಟದ ಗಾಡಿಗಳನ್ನು ತೆಗೆಸುವ ಬಗ್ಗೆ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತು.
- BWSSB ಕಛೇರಿ ಬಳಿ ಡೇಬ್ರಿಸ್ ತೆರವುಗೊಳಿಸಲು ಕಾಮಗಾರಿ ವಿಭಾಗಕ್ಕೆ ತಿಳಿಸಲಾಯಿತು.
- 3ನೇ ಮುಖ್ಯರಸ್ತೆ, ಜೆ.ಪಿ.ನಗರ 3ನೇ ಹಂತದಲ್ಲಿ ಮರದ ಕೊಂಬೆ ತೆರವುಗೊಳಿಸಲು ಸೂಚಿಸಲಾಯಿತು.
- ವಾರ್ಡ್ ನಂ. 177 ರಲ್ಲಿ E-Toilet ಗಳನ್ನು ವಿವಿಧ ಸ್ಥಳಗಳಲ್ಲಿ ಅಳವಡಿಸುವ ಬಗ್ಗೆ ಚರ್ಚಿಸಲಾಯಿತು.
- 9ನೇ ಮುಖ್ಯರಸ್ತೆಯಲ್ಲಿ ಗಿಡ ನೆಡುವ ಬಗ್ಗೆ ಮತ್ತು ಶೋಲ್ಡರ್ ಡ್ರೈನ್ ಮಾಡುವ ಬಗ್ಗೆ ಚರ್ಚಿಸಲಾಯಿತು.
- 11ನೇ ಅಡ್ಡರಸ್ತೆಯಲ್ಲಿನ ಪಾರ್ಕ್ ಅನ್ನು ಶೀಘ್ರದಲ್ಲಿ ಅಭಿವೃದ್ಧಿಪಡಿಸಲಾಗುವುದೆಂದು ಯೋಜನೆ (ದಕ್ಷಿಣ) ರವರು ತಿಳಿಸಿದರು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 10.30 ಘಂಟೆಗೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಸಕಾಲದಲ್ಲಿ ಹಾಜರಾಗುವಂತೆ ಹಾಗೂ ಈ ಸಭೆಯಲ್ಲಿ ತಿಳಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ರಾಮು .ಎಸ್ ರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Nagaraj. H.
ಅಧ್ಯಕ್ಷರು
ವಾರ್ಡ್ ಸಮಿತಿ, ವಾರ್ಡ್ ನಂ. 177
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned with CamScanner